ರಾಜ್ಯ ವಿಧಾನಸಭಾ ಚುನಾವಣೆಗಳು ಮುಗಿದಿವೆ. ಹೊಸ ಸರ್ಕಾರವೂ ಅಸ್ತಿತ್ವಕ್ಕೆ ಬಂದಿದೆ. ರಾಜ್ಯಾದ್ಯಂತ ಮಳೆಯಾಗುತ್ತಿದ್ದು, ರೈತರು ಕೃಷಿ ಚಟುವಟಿಕೆಗಳತ್ತ ಗಮನಹರಿಸಿದ್ದಾರೆ. ಈ ಸಂದರ್ಭದಲ್ಲಿ ನಾಡಿಗೆ ಅನ್ನ ನೀಡುವ ಸಾಧಕ ರೈತರನ್ನು ಪರಿಚಯಿಸಲು 'ಕನ್ನಡಪ್ರಭ' ಇಂದಿನಿಂದ ಸುದ್ದಿ ಸರಣಿ ಆರಂಭಿಸಿದೆ.

ವಾರ್ಷಿಕ ₹ 5 ಲಕ್ಷ ಆದಾಯ

ಸಮಗ್ರ ಬೇಸಾಯದಲ್ಲಿ ಪ್ರಗತಿಪರ ರೈತ ರಮಾನಂದ ಅವರಿಂದ ವಿಶೇಷ ಸಾಧನೆ

ಭಾಗ-1

• **ಅಂತಿ ಪ್ರಸನ್ನಕುಮಾರ್**
ಕನ್ನಡಪ್ರಭ ವಾರ್ತೆ ಮೈಸೂರು

ಟಿ.ನರಸೀಪುರ ತಾಲೂಕಿನ ರಂಗಸಮುದ್ರ ಗ್ರಾಮದ ಪ್ರಗತಿಪರ ರೈತ ರಮಾನಂದ ಅವರು ಸಮಗ್ರ ಕೃಷಿ ಬೇಸಾಯ ಪದ್ಧತಿ ಅಳವಡಿಸಿಕೊಂಡಿದ್ದು, ವಾರ್ಷಿಕ ಸುಮಾರು 5 ಲಕ್ಷ ರೂ. ನಿವ್ವಳ ಲಾಭ ಗಳಿಸುತ್ತಿದ್ದಾರೆ.

ಅವರು ತಮ್ಮ ಆರು ಎಕರೆ ಜಮೀನಿನಲ್ಲಿ ಸಮಗ್ರ ಕೃಷಿ ಚಟುವಟಿಕೆಗಳನ್ನು ನಿರ್ವಹಿಸುತ್ತಿದ್ದಾರೆ. ಪ್ರಮುಖವಾಗಿ ಕೃಷಿ, ತೋಟಗಾರಿಕೆ, ಹೈನುಗಾರಿಕೆ, ಅರಣ್ಯ ಕೃಷಿ, ಕುರಿ, ಕೋಳಿ ಸಾಕಾಣಿಕೆ, ಮೀನುಗಾರಿಕೆ, ಅಣಬೆ ಬೇಸಾಯ ಮತ್ತು ಸಾವಯವ ಕೃಷಿ ಮಾಡುತ್ತಿದ್ದಾರೆ. ಸಮಗ್ರ ಕೃಷಿ ತತ್ವದ ಮೂಲಕ ಇತರೆ ರೈತರಿಗೆ ಮಾದರಿಯಾಗಿ ಹೊರಹೊಮ್ಮಿದ್ದಾರೆ.

ತಮ್ಮ ಮೂರು ಎಕರೆ ಜಮೀನಿನಲ್ಲಿ ಕೃಷಿ ಬೆಳೆಗಳಾದ ಭತ್ತ, ರಾಗಿ, ಅಲಸಂದೆ, ಹೆಸರು, ಎಳ್ಳು ಮತ್ತು ಸಿರಿಧಾನ್ಯಗಳನ್ನು ಬೆಳೆಯತ್ತಿದ್ದಾರೆ.

ತೋಟಗಾರಿಕೆ ಬೆಳೆಗಳಾದ ಸೀಬೆ, ಬಾಳೆ, ಟೊಮ್ಯಾಟೋ, ಕುಂಬಳ, ಮಂಗಳೂರು ಸೌತೆ, ನಿಂಬೆ ಬೆಳೆಗಳಿಂದ ಅಧಿಕ ಲಾಭ ಗಳಿಸುತ್ತಿದ್ದಾರೆ. ತೆಂಗಿನ ಬೆಳೆಯಲ್ಲಿ ಪ್ರತೀ ವರ್ಷವು 10,000ಕ್ಕೂ ಹೆಚ್ಚು ಕಾಯಿಗಳನ್ನು ಎಳನೀರಿಗಾಗಿ ಮಾರಾಟ ಮಾಡಿ, ಉತ್ತಮ ಲಾಭ ಗಳಿಸುತ್ತಿದ್ದಾರೆ. ತಾವು ಬೆಳೆದ ಹಣ್ಣು ಮತ್ತು ತರಕಾರಿಗಳನ್ನು, ಸಾಕಿರುವ ಕೋಳಿಗಳನ್ನು (ಕಡಕ್ ನಾಥ್-04, ಬಾತು ಕೋಳಿ-6 ಮತ್ತು ನಾಟಿ ಕೋಳಿ -40) ಸ್ವತಃ ತಾವೇ ಮಾರಾಟ ಮಾಡುತ್ತಿದ್ದಾರೆ.

ಭತ್ತದ ಬೆಳೆಯಲ್ಲಿ ನ್ಯಾನೋ ಯೂರಿಯಾ ಗೊಬ್ಬರವನ್ನು ಬಳಕೆ ಮಾಡಿ ಅದರ ಅನುಕೂಲಗಳ ಬಗ್ಗೆ ತಿಳಿದುಕೊಂಡಿದ್ದಾರೆ. ಅಲ್ಲದೇ ತ್ಯಾಜ್ಯ ಘಟಕವನ್ನು ತಮ್ಮ ಜಮೀನಿನಲ್ಲಿ ಬಳಕೆ ಮಾಡುತ್ತಿದ್ದು, ಜೈವಿಕ ಗೊಬ್ಬರ ಹಾಗೂ ಎರೆಗೊಬ್ಬರ ತಯಾರಿಕೆಯಲ್ಲಿ ಕೂಡಾ ತೊಡಗಿಸಿಕೊಂಡಿದ್ದಾರೆ.

ಜೈವಿಕ ತ್ಯಾಜ್ಯದ ಸಮರ್ಪಕ ಮರು ಬಳಕೆಯಿಂದ ಮಣ್ಣಿನ ಫಲವತ್ತತೆಯನ್ನು ಹೆಚ್ಚಿಸಿಕೊಂಡಿದ್ದು ಬೇಸಾಯದ ಖರ್ಚನ್ನು ಕಡಿಮೆ ಮಾಡಿ ನಿವ್ವಳ ಆದಾಯವನ್ನು ಹೆಚ್ಚಿಸಿಕೊಂಡಿದ್ದಾರೆ. ಎರೆಗೊಬ್ಬರ ತೊಟ್ಟಿ ನಿರ್ಮಿಸಿಕೊಂಡು ಉತ್ತಮ ಗುಣಮಟ್ಟದ ಎರೆಗೊಬ್ಬರ ತಯಾರಿಸುತ್ತಿದ್ದು, ತಮ್ಮ ಜಮೀನಿಗೆ ಬಳಸಿ ಕೊಳ್ಳುತ್ತಿದ್ದಾರೆ.

ಅಲ್ಲದೇ ದ್ರವರೂಪ ಗೊಬ್ಬರವಾದ ಜೀವಾಮೃತವನ್ನು ತಯಾರು ಮಾಡಿಕೊಂಡು ಬೆಳೆಗಳಿಗೆ ಪೋಷಕಾಂಶಗಳನ್ನು ಪೂರೈಸುತ್ತಿದ್ದಾರೆ.

ಅರಣ್ಯ ಬೆಳೆಗಳಾದ ಬೇವು, ತೇಗ, ಸಿಲ್ವರ್ ಇತ್ಯಾದಿ ಮರಗಳನ್ನು ತಮ್ಮ ಜಮೀನಿನ ಸುತ್ತಲೂ ಬೆಳೆದು, ಉತ್ತಮ ಆದಾಯವನ್ನು ಕಂಡುಕೊಂಡಿದ್ದಾರೆ. ಒಟ್ಟು 3 ಜೇನು ಪೆಟ್ಟಿಗೆಗಳನ್ನು ಹೊಂದಿದ್ದು, ಮನೆ ಬಳಕೆಗೆ ಜೇನುತುಪ್ಪವನ್ನು ಉಪಯೋಗಿಸುತ್ತಿದ್ದಾರೆ.

ಕೃಷಿ ಮಾರುಕಟ್ಟೆಗೆ ಸಂಬಂಧಿಸಿದ ಮಾಹಿತಿಗಳನ್ನು ಟಿ.ವಿ, ರೇಡಿಯೋ ಮತ್ತು ಪತ್ರಿಕೆಗಳ ಮುಖಾಂತರ ಪಡೆದುಕೊಂಡು ಸೂಕ್ತ ಬೆಲೆಗೆ ಮಾರಾಟ ಮಾಡುತ್ತಿದ್ದಾರೆ.

ರಮಾನಂದ ಅವರು ಭತ್ತದ ಬೆಳೆಗಾರರ ಸಂಘ, ಹಾಲು ಉತ್ಪಾದಕ ಸಂಘಗಳ ಸದಸ್ಯರಾಗಿದ್ದು, ಕೃಷಿ ಸಂಬಂಧಿತ ತರಬೇತಿ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಅಲ್ಲಿ ಪಡೆದುಕೊಂಡ ಕೃಷಿ ತಾಂತ್ರಿಕ ಮಾಹಿತಿಗಳನ್ನು ತಮ್ಮ ಜಮೀನಿನಲ್ಲಿ ಅಳವಡಿಸಿಕೊಂಡಿದ್ದಾರೆ.

ನಾಗನಹಳ್ಳಿ ವಿಸ್ತರಣಾ ಶಿಕ್ಷಣ ಘಟಕ, ಕೃಷಿ ಇಲಾಖೆ ಹಾಗೂ ಕೃಷಿ ವಿಶ್ವವಿದ್ಯಾನಿಲಯದ ವಿಜ್ಞಾನಿಗಳ ಮಾಗದರ್ಶನದಲ್ಲಿ ಹಲವಾರು ಕ್ಷೇತ್ರ ಪ್ರಯೋಗ, ಮುಂಚೂಣಿ ಪ್ರಾತ್ಯಕ್ಷಿಕೆಗಳನ್ನು ತಮ್ಮ ಜಮೀನಿನಲ್ಲಿ ಅಳವಡಿಸಿಕೊಂಡು ನೂತನ ತಳಿಗಳ ಬಿಡುಗಡೆಯಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ. 2019 ರಲ್ಲಿ ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರಿನಲ್ಲಿ ನಡೆದ ಕೃಷಿಮೇಳದಲ್ಲಿ ಟಿ. ನರಸೀಪುರ ತಾಲ್ಲೂಕಿನ ಯುವ ರೈತ ಪ್ರಶಸ್ತಿ, 2019-20 ಮತ್ತು 2020-21 ನೇ ಸಾಲಿನಲ್ಲಿ ಕೃಷಿ ಇಲಾಖೆಯ ಆತ್ಮ ಯೋಜನೆಯಡಿ ನೀಡಲಾಗುವ ಶ್ರೇಷ್ಠ ಕೃಷಿಕ ಪ್ರಶಸ್ತಿ ಪಡೆದಿದ್ದಾರೆ. 2022ನೇ ಸಾಲಿನಲ್ಲಿ ಜಿಲ್ಲಾ ಮಟ್ಟದ ಕೃಷಿ ಪ್ರಶಸ್ತಿ ಪಡೆದಿದ್ದಾರೆ.

ಸಂಪರ್ಕ ವಿಳಾಸ: ರಮಾನಂದ ಬಿನ್ ಸಿದ್ದೇಗೌಡ, ರಂಗಸಮುದ್ರ ಗ್ರಾಮ, ಕಸಬಾ ಹೋಬಳಿ, ಟಿ.ನರಸೀಪುರ ತಾ. ಮೊ.99807 36609.

ಕೃಷಿಯಿಂದ ನೆಮ್ಮದಿ ಕೃಷಿ ನನಗೆ ಖುಷಿ ನೀಡಿದೆ. ಊರಿನ ಪಕ್ಕದಲ್ಲಿಯೇ ಇರುವ ಜಮೀನಿನಲ್ಲಿಯೇ ಮನೆ ಕಟ್ಟಿಕೊಂಡು ಸದಾಕಾಲ ವ್ಯವಸಾಯ ಮಾಡುತ್ತಾ ನೆಮ್ಮದಿಯಿಂದ ಜೀವನ ಸಾಗಿಸುತ್ತಿದ್ದೇನೆ. ಸರಿಯಾಗಿ ಮಾಡಿದರೆ ಬೇಸಾಯದಿಂದ ನಷ್ಟವಂತೂ ಇಲ್ಲವೇ ಇಲ್ಲ.
• **ರಮಾನಂದ,** ರಂಗಸಮುದ್ರ

ಕ್ಷೇತ್ರ ಪ್ರಯೋಗ, ಪದ್ಧತಿ ಪ್ರಾತ್ಯಕ್ಷಿಕೆ, ವಿವಿಧ ವಿಷಯಗಳ ತರಬೇತಿ, ವಿಚಾರ ಸಂಕಿರಣ, ಕ್ಷೇತ್ರ ಭೇಟಿಯ ಮೂಲಕ ರೈತರಿಗೆ ಸೂಕ್ತ ಮಾಹಿತಿ ನೀಡಲಾಗುತ್ತಿದೆ.
• **ಡಾ.ಸಿ. ರಾಮಚಂದ್ರ** ಬೇಸಾಯಶಾಸ್ತ್ರ ಪ್ರಾಧ್ಯಾಪಕರು ಹಾಗೂಊವಿಸ್ತರಣಾ ಮುಂದಾಳು, ವಿಸ್ತರಣಾ ಶಿಕ್ಷಣ ಘಟಕ, ನಾಗನಹಳ್ಳಿ

ಸುತ್ತೂರು ಮಠಕ್ಕೆ ಸಚಿವ ಎಂ.ಬಿ ಪಾಟೀಲ್ ಭೇಟಿ

ಮೈಸೂರು ಜಿಲ್ಲೆ ಸುತ್ತೂರಿನ ಮಠಕ್ಕೆ ಸೋಮವಾರ ಭೇಟಿ ನೀಡಿದ್ದ ಸಚಿವ ಎಂ.ಬಿ. ಪಾಟೀಲ್ ದಂಪತಿಯನ್ನು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಸನ್ಮಾನಿಸಿದರು. ವರುಣ ಮಹೇಶ್ ಮೊದಲಾದವರು ಇದ್ದರು.

• **ಕನ್ನಡಪ್ರಭ ವಾರ್ತೆ** ಸುತ್ತೂರು

ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಸ್ಪಷ್ಟ ಬಹುಮತ ಸಿಕ್ಕಿ ಸರ್ಕಾರ ರಚನೆಯಾಗುತ್ತಿದೆ. ಇದರ ಬೆನ್ನಲ್ಲೇ ಕೈ ನಾಯಕರು ಟೆಂಪಲ್ ರನ್ ಶುರು ಮಾಡಿದ್ದಾರೆ. ವರುಣ ವಿಧಾನಸಭಾ ಕ್ಷೇತ್ರದ ನಂಜನಗೂಡು ತಾಲೂಕಿನ ಸುತ್ತೂರು ಮಠಕ್ಕೆ ನೂತನ ಸಚಿವ ಎಂ.ಬಿ ಪಾಟೀಲ್ ಅವರು ತಮ್ಮ ಪತ್ನಿ ಆಶಾ ಪಾಟೀಲ್ ಜೊತೆ ಭೇಟಿ ನೀಡಿ, ಶ್ರೀಗಳ ಗದ್ದುಗೆಗೆ ವಿಶೇಷ ಪೂಜೆ ಸಲ್ಲಿಸಿದರು. ದೇವರ ದರ್ಶನ ಪಡೆದು ಸುತ್ತೂರು ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿಗಳ ಆಶೀರ್ವಾದ ಪಡೆದರು.

ನಂತರ ಕೆಲಕಾಲ ಧ್ಯಾನ ಮಂದಿರದಲ್ಲಿ ಎಂ.ಬಿ ಪಾಟೀಲ್ ಕುಳಿತು ಪ್ರಾರ್ಥನೆ ಸಲ್ಲಿಸಿದ್ದು, ಶ್ರೀಗಳ ಜೊತೆ ಮಾತುಕತೆ ನಡೆಸಿದರು. ಈ ವೇಳೆ ಮಾತನಾಡಿದ ಎಂ.ಬಿ. ಪಾಟೀಲ್ ಅವರು, ಇಂದು ನಾನು ಶಾಸಕನಾಗಿ ಪ್ರಮಾಣ ಸ್ವೀಕರಿಸಿದ್ದೇನೆ. ಹೀಗಾಗಿ ರಾಜ್ಯದ ಸೇವೆ ಮಾಡಲು ಈ ಪುಣ್ಯಕ್ಷೇತ್ರಕ್ಕೆ ಭೇಟಿ ಕೊಟ್ಟಿದ್ದು ಶ್ರೀಗಳ ಆಶೀರ್ವಾದ ಪಡೆದಿದ್ದೇನೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಎಂ ಬಿ ಪಾಟೀಲ್ ಜೊತೆ ಕಾಂಗ್ರೆಸ್ ಸ್ಥಳೀಯ ಮುಖಂಡರು ಭಾಗವಹಿಸಿದ್ದರು.

ರಾಜ್ಯದಲ್ಲಿ ಸಿದ್ದರಾಮಯ್ಯ 5ವರ್ಷ ಪೂರ್ಣಾವಧಿ ಸಿಎಂ ಆಗಲಿದ್ದಾರೆ

ಮೈಸೂರು : ರಾಜ್ಯದಲ್ಲಿ ಅಧಿಕಾರ ಹಂಚಿಕೆ ಬಗ್ಗೆ ಯಾವುದೇ ಮಾತುಕತೆ ನಡೆದಿಲ್ಲ ಎಂದು ಸಚಿವ ಎಂಬಿ. ಪಾಟೀಲ್ ತಿಳಿಸಿದ್ದಾರೆ. ಸಚಿವ ಸ್ಥಾನ ದೊರಕಿದ ನಂತರ ಮೈಸೂರಿಗೆ ಭೇಟಿ ನೀಡಿದ ಅವರು, ಸಿಎಂ ಸಿದ್ದರಾಮಯ್ಯ ಪರ ಬ್ಯಾಟ್ ಬೀಸಿ, ಲೋಕಸಭೆ ಚುನಾವಣೆ ಬಳಿಕ ಯಾವುದೇ ಬದಲಾವಣೆ ಇಲ್ಲ. ಸಿಎಂ ಬದಲಾವಣೆ ಬಗ್ಗೆ ಅಐಇಇ ಮಟ್ಟದಲ್ಲಿ ಯಾವುದೇ ಚರ್ಚೆ ನಡೆದಿಲ್ಲ. ಸಿದ್ದರಾಮಯ್ಯ ಮುಂದಿನ ಐದು ವರ್ಷವೂ ಸಿಎಂ ಆಗಲಿದ್ದಾರೆ ಎಂದು ಅಐಇಇ ಕಾರ್ಯದರ್ಶಿ ವೇಣುಗೋಪಾಲ್ ಸ್ಪಷ್ಟಪಡಿಸಿದ್ದಾರೆ ಎಂದರು.

ಬಿಜೆಪಿ ಅಧಿಕಾರವಧಿಯಲ್ಲಿ ನಡೆದ ಎಲ್ಲ ಹಗರಣಗಳ ಬಗ್ಗೆ ತನಿಖೆ ನಡೆಸುತ್ತೇವೆ. ಪಿಎಸ್ಐ ಹಗರಣ, ಆರೋಗ್ಯ ಇಲಾಖೆ, ನೀರಾವರಿ ಇಲಾಖೆ ಹಾಗೂ ಇತರೆ ಇಲಾಖೆ ಬಗ್ಗೆ ತನಿಖೆ ನಡೆಸುತ್ತೇವೆ. ಎಲ್ಲಾ ಹಗರಣಗಳನ್ನ ಲಾಜಿಕ್ ಎಂಡ್ ಗೆ ತೆಗೆದುಕೊಂಡು ಹೋಗುತ್ತೇವೆ. ತಪ್ಪಿತಸ್ಥರಿಗೆ ಶಿಕ್ಷೆ ಕೊಡಿಸುತ್ತೇವೆ, ನೊಂದ ವಿದ್ಯಾರ್ಥಿಗಳಿಗೆ ನ್ಯಾಯ ಕೊಡಿಸುತ್ತೇವೆ ಎಂದರು. ಗ್ಯಾರೆಂಟಿ ಕಾರ್ಡ್ ವಿಚಾರದ ಬಗ್ಗೆ ಮಾತನಾಡಿದ ಅವರು, ಮೊದಲ ಕ್ಯಾಬಿನೆಟ್ ಮೀಟಿಂಗ್‌ನಲ್ಲಿ ಚರ್ಚೆ ಆಗಿದ್ದು, ತಾತ್ವಿಕ ಒಪ್ಪಿಗೆ ನೀಡಲಾಗಿದೆ. ಈ ವಿಚಾರದಲ್ಲಿ ಯಾವುದೇ ಬದಲಾವಣೆ ಆಗುವುದಿಲ್ಲ ಎಂದರು.

ವಾರಕ್ಕೊಮ್ಮೆ ಪಕ್ಷದ ಶಾಸಕರು ಕಾಂಗ್ರೆಸ್ ಕಚೇರಿಗೆ ಭೇಟಿ ನೀಡಲಿ

• **ಕನ್ನಡಪ್ರಭ ವಾರ್ತೆ** ಮೈಸೂರು

ಕಾಂಗ್ರೆಸ್‌ನ ಎಲ್ಲಾ ಶಾಸಕರು, ಸಚಿವರು ಪಕ್ಷದ ಸಿದ್ಧಾಂತ ಹಾಗೂ ಶಿಷ್ಟಾಚಾರಕ್ಕೆ ಮೊದಲ ಆದ್ಯತೆ ನೀಡಿ, ಪಕ್ಷದೊಡನೆ ನಿರಂತರ ಸಂಪರ್ಕದಲ್ಲಿದ್ದು ಪಕ್ಷದ ಬಲವರ್ಧನೆಗೆ ಎಲ್ಲಾ ರೀತಿಯ ಸಹಕಾರ ನೀಡಬೇಕು ಎಂದು ಜಿಲ್ಲಾ ಕಾಂಗ್ರೆಸ್ ಸಮಿತಿ ಒತ್ತಾಯಿಸಿದೆ.

ಭಾನುವಾರ ನಡೆದ ಕಾಂಗ್ರೆಸ್ ಶಾಸಕರ ಸನ್ಮಾನ ಸಮಾರಂಭದಲ್ಲಿ ಜಿಲ್ಲಾ ಕಾಂಗ್ರೆಸ್ ಸಮಿತಿಯು ಕೆಲವು ನಿರ್ಣಯ ಕೈಗೊಂಡಿತು. ಈ ಪೈಕಿ ಕೆಲವು ಪ್ರಮುಖ ವಿಚಾರಗಳನ್ನು ನೂತನ ಶಾಸಕರಿಗೆ ಸಲ್ಲಿಸಿದರು.

ಪ್ರತಿ ವಾರಕ್ಕೆ ಒಂದು ಬಾರಿ ಜಿಲ್ಲೆಯ ಎಲ್ಲಾ ಶಾಸಕರು ಕಾಂಗ್ರೆಸ್ ಕಚೇರಿಗೆ ಭೇಟಿ ನೀಡಿ, ಕಾಂಗ್ರೆಸ್ ಪದಾಧಿಕಾರಿಗಳ ಕುಂದು ಕೊರತೆ ಸಂಪರ್ಕ ಸಭೆ ನಡೆಸಬೇಕು. ಜಿಲ್ಲೆಯ ಉಸ್ತುವಾರಿ ಸಚಿವರು ಪ್ರತಿ ತಿಂಗಳಿಗೊಮ್ಮೆ ಕಾಂಗ್ರೆಸ್ ಭವನಕ್ಕೆ ಭೇಟಿ ನೀಡಿ ಕಾಂಗ್ರೆಸ್ ಕಾರ್ಯಕರ್ತರ ಮನವಿಗಳ ಸ್ವೀಕಾರ ಹಾಗೂ ಸರ್ಕಾರ ಮಟ್ಟದಲ್ಲಿ ಅದಕ್ಕೆ ಪರಿಹಾರ ಕಲ್ಪಿಸಬೇಕು.

ಜಿಲ್ಲೆಗೆ ವಿವಿಧ ಕಾರಣಗಳಿಗೆ ಭೇಟಿ ನೀಡುವ ಸಚಿವ ಸಂಪುಟದ ಎಲ್ಲಾ ಸಚಿವರು ಸರ್ಕಾರಿ ಕಾರ್ಯಕ್ರಮ ಹೊರತುಪಡಿಸಿ ಮೈಸೂರು ಕಾಂಗ್ರೆಸ್ ಕಚೇರಿಗೆ ಭೇಟಿ ನೀಡಿ ಕಾರ್ಯಕರ್ತರ ಆವಾಲುಗಳನ್ನು ಸ್ವೀಕರಿಸುವುದು ಹಾಗೂ ಪರಿಹಾರಕ್ಕೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧ್ಯಕ್ಷ ಡಾ.ಬಿ.ಜೆ. ವಿಜಯಕುಮಾರ್ ಕೋರಿದ್ದಾರೆ.

ಶಿವಾರ್ಚಕ ಟ್ರಸ್ಟ್‌ನಿಂದ ಪ್ರತಿಭಾ ಪುರಸ್ಕಾರ

ಮೈಸೂರು: ಕರ್ನಾಟಕ ರಾಜ್ಯ ಶಿವಾರ್ಚಕ ಟ್ರಸ್ಟ್‌ನಿಂದ 2022-23ನೇ ಶೈಕ್ಷಣಿಕ ವರ್ಷದಲ್ಲಿ ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಶೇ. 85ಕ್ಕಿಂತ ಹೆಚ್ಚು ಅಂಕ ಗಳಿಸಿ ತೇರ್ಗಡೆ ಹೊಂದಿರುವ ಶಿವಾರ್ಚಕ ಜನಾಂಗದ ಪ್ರತಿಭಾವಂತ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಲಿದೆ. ಶಿವಾರ್ಚಕ ಜನಾಂಗದ ವಿದ್ಯಾರ್ಥಿಗಳು ಜೂ. 5ರೊಳಗೆ ಮುಖ್ಯೋಪಾಧ್ಯಯರಿಂದ ದೃಢೀಕೃತ ಅಂಕಪಟ್ಟಿ, ಆಧಾರ್ ಪ್ರತಿ ಮತ್ತು ಸರಿಯಾದ ಒಬ್ಬೈಲ್ ನಂಬರ್ ಈ ಮಾಹಿತಿಗಳನ್ನು ಈ. ವಾಮದೇವ, ನಂ. 896, 3ನೇ ಮುಖ್ಯರಸ್ತೆ, 3ನೇ ಅಡ್ಡರಸ್ತೆ, ಕನಕದಾಸನಗರ, ಎ ಬ್ಲಾಕ್, ಮೈಸೂರು-22, ಈ ವಿಳಾಸಕ್ಕೆ ಅಂಚೆಯ ಮೂಲಕ ಕಳುಹಿಸುವುದು. ಮಾಹಿತಿಗಾಗಿ ಮೊ. 9448576450, 9731357585 ಸಂಪರ್ಕಿಸಬಹುದು.



SDJ GOLD
ನೀವು ಗಿರವಿ ಇಟ್ಟು ಬಿಡಿಸಿಕೊಳ್ಳಲಾಗದ ಚಿನ್ನವನ್ನು ನಾವೇ ಹಣಕೊಟ್ಟು ಬಿಡಿಸಿ ಉಳಿದ ಹಣ ತಕ್ಷಣ ಕೊಡುತ್ತೇವೆ.
ಒಂದು ಗ್ರಾಂ ಚಿನ್ನಕ್ಕೆ 6600
8884304444

CAUTION - Readers are advised to make appropriate enquiries while responding to advertisements in these columns. Kannada Prabha Publications Ltd., does not vouch for any claims made by the advertisers. The Printer, Publisher, Editor and Owner of Kannada Prabha Publications Ltd., shall not be held responsible/ liable for any consequences, in case such claims are found to be false. ಕನ್ನಡಪ್ರಭ

ಪೃದ್ಧಿ ಅಸೆಟ್ ರೀಕನ್‌ಸ್ಟ್ರಕ್ಷನ್ ಅಂಡ್ ಸೆಕ್ಯೂರಿಟೈಜೇಷನ್ ಕಂಪನಿ ಲಿಮಿಟೆಡ್
ನೋಂದಾಯಿತ ಮತ್ತು ಕಾರ್ಪೋರೇಟ್ ಕಛೇರಿ: ಡಿ.ನಂ. 1-55, ರಾಜಾ ಪ್ರಸಾದಮು, 4ನೇ ಮಹಡಿ, ವಿಂಗ್-1 ಮಸೀದಿ ಬಾಂಡ ರಸ್ತೆ, ಕೊಂಡಾಪುರ್, ಹೈದರಾಬಾದ್-500084. CIN: U67120TG2007PLC053327, Tel: 040- 41413333, Fax: 040-41413301, E-mail: co@paras.org.in, Web: www.paras.org.in

ಮೆ॥ ವಿಕ್ರಮ್ ಹಾಸ್ಪಿಟಲ್ ಪ್ರೈವೇಟ್ ಲಿಮಿಟೆಡ್ ಸ್ಥಿರಾಸ್ತಿಯ ಮಾರಾಟಕ್ಕಾಗಿ ಆಹ್ವಾನಿಸುವ ಮೊಹರು ಮಾಡಿದ ಟೆಂಡರ್ಸ್- ಕಮ್ - ಇ-ಹರಾಜು ಮಾರಾಟದ ಸೂಚನೆ

2002 ರ ಭದ್ರತಾ ಹಿತಾಸಕ್ತಿ ನಿಯಮಗಳ ನಿಯಮ 6(2) ಮತ್ತು ನಿಯಮ 9(1) ಪ್ರಾವಿಸೋದೊಂದಿಗೆ ಓದಿಕೊಳ್ಳಬೇಕಾದ 2002ರ ಹಣಕಾಸು ಆಸ್ತಿಗಳ ಭದ್ರತೆ ಮತ್ತು ಪುನರ್ ನಿರ್ಮಾಣ ಹಾಗೂ ಭದ್ರತಾ ಹಿತಾಸಕ್ತಿ ಜಾರಿ ಕಾಯಿದೆಯಡಿ ಮೆ॥ ವಿಕ್ರಂ ಹಾಸ್ಪಿಟಲ್ ಪ್ರೈವೆಟ್ ಲಿ.,ನ ಮಾರಾಟದ ಸೂಚನೆ 2002ರ ಹಣಕಾಸು ಆಸ್ತಿಗಳ ಮತ್ತು ಸೆಕ್ಯೂರಿಟಿ ಇಂಟರೆಸ್ಟ್ (ಎನ್‌ಫೋರ್ಸ್‌ಮೆಂಟ್) ನಿಯಮಗಳ ನಿಯಮ 6(2) ಮತ್ತು ನಿಯಮ 9(1)ಕ್ಕಾಗಿನ ಪ್ರಾವಿಸೋದೊಂದಿಗೆ ಓದಿಕೊಳ್ಳಬೇಕಾದ ಭದ್ರತಾ ಹಿತಾಸಕ್ತಿ (ಜಾರಿ) ಸೆಕ್ಯೂರಿಟೈಜೇಷನ್ ಅಂಡ್ ರೀಕನ್‌ಸ್ಟ್ರಕ್ಷನ್ ಆಫ್ ಫೈನಾನ್ಷಿಯಲ್ ಅಸೆಟ್ಸ್ ಅಂಡ್ ಎನ್‌ಫೋರ್ಸ್‌ಮೆಂಟ್ ಆಫ್ ಸೆಕ್ಯೂರಿಟಿ ಇಂಟರೆಸ್ಟ್ ಕಾಯಿದೆ 2002ಡಿ ಚರಾಸ್ತಿ ಮತ್ತು ಸ್ಥಿರಾಸ್ತಿಗಳ ಇ-ಹರಾಜು ಮಾರಾಟ ಸೂಚನೆ

ಸಾರ್ವಜನಿಕರಿಗೆ ವಿಸ್ತಾರವಾಗಿ ಮತ್ತು ಸಾಲಗಾರ(ರು)ಗೆ,ಅಡಮಾನದಾರರ/ರು ಮತ್ತು ಜಾಮೀನುದಾರ/ರು ಗೆ ನಿರ್ದಿಷ್ಟವಾಗಿ ಸೂಚನೆ ನೀಡುವುದೇನೆಂದರೆ ಭದ್ರತಾ ಸಾಲಗಾರರಿಂದ ಅಡವಿಡಲಾದ/ಹೈಪೋಥಿಕೇಟೆಡ್/ಸುಪರ್ದಿಯಲ್ಲಿರುವ ಕೆಳಕಂಡ ವಿವರಿಸಲಾದ ಚರಾಸ್ತಿ ಮತ್ತು ಸ್ಥಿರಾಸ್ತಿಗಳನ್ನು ಅಧಿಕೃತ ಅಧಿಕಾರಿ, ಬೆಂಗಳೂರಿನ ಎನ್‌ಎಎಲ್‌ಟಿಯಿಂದ ನೇಮಕಗೊಂಡ ರೆಸಲ್ಯೂಶನ್ ಪ್ರೊಫೆಷನಲ್‌ನಿಂದ ಸೆಕ್ಯೂರ್ಡ್ ಕ್ರೆಡಿಟರ್ ಇವರು ಸ್ವಾಧೀನತೆಯನ್ನು ಪಡೆದುಕೊಂಡಿದ್ದು, ಎಲ್ಲಿ ಹೇಗಿದೆಯೋ ಹಾಗೆಯೇ, ಮತ್ತು ಎಲ್ಲಿ ಏನಿದೆಯೋ ಹಾಗೆಯೇ, ಎಲ್ಲಿ ಏನೇನು ಉಳಿದಿದೆಯೋ ಹಾಗೆಯೇ, ಆಧಾರದಲ್ಲಿ **16.06.2023**ರಂದು ಮಾರಾಟ ಮಾಡಲಿದ್ದಾರೆ. ಸಾಲಗಾರರಿಂದ ಬಾಕಿ ವಸೂಲಾತಿಗಾಗಿ ಮೊಬಲಗು **31.01.2023**ರಂದು ಇದ್ದಂತೆ ರೂ.**117,76,41,226** (ನೂರ ಹದಿನೇಳು ಕೋಟಿ ಎಪ್ಪತ್ತಾರು ಲಕ್ಷದ